**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕನಕಪುರ**
**ಸಿ.ಸಿ ನಂ. 1180/2019**

ದಿನಾಂಕ:**.11.12.2025** ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ ಶ್ರೀ. ಕೆ.ಎಂ.ಜಿ ವಕೀಲರಿಂದಃ**

ಘಟನೆ ಯಾವ ದಿನಾಂಕದಂದು ಆಯಿತು ಎಂದು ನಿಖರವಾಗಿ ಗೊತ್ತಿಲ್ಲ. ನಿಪಿ-2 ಪಂಚನಾಮೆಯನ್ನು ಯಾವ ದಿನಾಂಕದಂದು ಮಾಡಲಾಯಿತು ಎಂದು ನಿಖರವಾಗಿ ಗೊತ್ತಿಲ್ಲ. ಪಂಚನಾಮೆಯನ್ನು ರವಿ ಎನ್ನುವವರು ಮಾಡಿದರು. ನಿಪಿ-2 ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನಿಪಿ-2 ಪಂಚನಾಮೆಗೆ ಯಾರು ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದೇನೆ ಎಂದರೆ ಸರಿ . ಪೊಲೀಸರು ನನ್ನ ಸಮಕ್ಷಮ ಏನನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರಿದು ಒಂದು ದೊಣ್ಣೆಯನ್ನು ವಶಪಡಿಸಿಕೊಂಡಿದ್ದರು. ಎಂ.ಒ -1 ದೊಣ್ಣೆ ಮೇಲೆ ನನ್ನ ಸಹಿ ಪಡೆದಿರುವುದಿಲ್ಲ. ನನ್ನ ಸಮಕ್ಷಮ ಪಂಚನಾಮೆ ಆಗಿರುವುದಿಲ್ಲ ಮತ್ತು ಪೊಲೀಸರು ಏನನ್ನು ವಶಪಡಿಸಿಕೊಳ್ಳದಿದ್ದರೂ ಚಾಸಾ-1 ರವರ ಪರವಾಗಿ ಸುಳ್ಳು ಸಾಕ್ಷ್ಯ ನುಡಿಯಲು ಬಂದಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**